ದಿನಾಂಕಃ 20.07.2026 ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ ವಾದಿ ಪರ ಶ್ರೀ ಡಿ.ಎಸ್. ವಕೀಲರಿಂದ ಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳನ್ನು ನಾನೇ ಖುದ್ದು ನನ್ನ ವಕೀಲರಿಗೆ ಹೇಳಿ ತಯಾರು ಮಾಡಿಸಿರುತ್ತೇನೆ. ಅದರಿಲ್ಲಿರುವ ಎಲ್ಲ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ಬೋರೇಗೌಡರು ಕೃಷ್ಣಣ್ಣರವರ ಕಡೆಯಿಂದ ಸಾಲವನ್ನು ಪಡೆದುಕೊಂಡು ಪತ್ರವನ್ನು ಬರೆದುಕೊಡುತ್ತಿದ್ದರು, ಆ ಸಮಯದಲ್ಲಿ ನಾನು ಸಾಕ್ಷಿದಾರನಾಗಿ ಸಹಿ ಹಾಕಿದ್ದೇನೆ. ಸಾಕ್ಷಿಯು ನಿಪಿ-1 ಮತ್ತು 2 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ಸಹಿಗಳನ್ನು ನಿಪಿ-1(ಬಿ) ಮತ್ತು 2(ಬಿ) ಎಂದು ಈಗಾಗಲೇ ಗುರುತಿಸಲಾಗಿದೆ. ನನ್ನ ಜೊತೆಗೆ ಮಹದೇವಣ್ಣರವರು ಸಹ ಸಹಿ ಮಾಡಿರುತ್ತಾರೆ.

**ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಮುಂದೂಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಹೇ. ಕೇ. ಸ. ಇದೆ.**

**ಪ್ರದಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**

**ಸಾಕ್ಷಿದಾರರ ಸಹಿ.** **ಪಾಂಡವಪುರ.**